ತಾರೀಖು 20ನೆ ಮಾರ್ಚಿ 1907.

ನಂ. 8625—ಸ್ಯಾನಿಟೆರಿ 156-06—14, ಕೋಲಾರ ಡಿಸ್ಟ್ರಿಕ್ಟು ಸಿಡ್ಲಘಟ್ಟ ತಾಲ್ಲೂಕಿನ ಮೇಲೂರು ಗ್ರಾಮಕ್ಕೆ ಶ್ರೀ ಗಂಗಮ್ಮನವರ ಜಾತ್ರೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀವರ್ಮ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀವರ್ಮ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಮಾರ್ಚಿ 27ನೆ ತಾರೀಖಿನಿಂದ 1907ನೆ ಇಸವಿ ಏಪ್ರೆಲ್ 6ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್ನಾವೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು

ತಾರೀಖು 20ನೆ ಮಾರ್ಚಿ 1907.

ನಂ. 8627—ಸ್ಯಾನಿಟೆರಿ 129-06—8, ಶಿವಮೊಗ್ಗ ಡಿಸ್ಟ್ರಿಕ್ಟು ನಗರ ತಾಲ್ಲೂಕಿನ ರಾಮಚಂದ್ರಪುರಕ್ಕೆ ಶ್ರೀ ರಾಮದೇವರ ಜಾತ್ರೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವದಕ್ಕೆ ಅವಕಾಶ ಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀವರ್ಮ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀವರ್ಮ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಏಪ್ರೆಲ್ 20ನೆ ತಾರೀಖಿನಿಂದ 1907ನೆ ಏಪ್ರೆಲ್ 24ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್ನಾವೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 20ನೆ ಮಾರ್ಚಿ 1907.

ನಂ. 8629—ಸ್ಯಾನಿಟೆರಿ. 170-06—18, ಮೈಸೂರು ಡಿಸ್ಟ್ರಿಕ್ಟು ಫ್ರೆಂಚ್‌ರಾಕ್ಸ್ ಸಬ್ ತಾಲ್ಲೂಕಿನ ಮೇಲ್ಕೋಟೆಗೆ ಶ್ರೀ ರಾಮಾನುಜಾಚಾರ್ಯರವರ ತಿರುನಕ್ಷತ್ರ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀವರ್ಮ ಮಹಾರಾಜರವರ ಸರಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀವರ್ಮ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಏಪ್ರೆಲ್ 9ನೆ ತಾರೀಖಿನಿಂದ ಅದೇ ತಿಂಗಳು 20ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್ನಾವೆಗೆ ವಿರೋಧವಾಗಿ ಮೇಲ್ಕಂಡ ತಿರುನಕ್ಷತ್ರಕ್ಕೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 20ನೆ ಮಾರ್ಚಿ 1907.

ನಂ. 8631—ಸ್ಯಾನಿಟೆರಿ 66-06—38, ಸಮಸ್ತ ಜನರ ತಿಳಿವಳಿಕೆದು ಬಗ್ಯೆ ಇದರಿಂದ ಪ್ರಸಿದ್ಧಪಡಿಸುವುದೇನಂದರೆ :— ಹಾಸನ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶವು ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9383—ಮಿಸ್ಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21—96 ಈ ನಂಬರುಗಳ ಇಸ್ತಿಹಾರ್ನಾವೆಗಳಿಂದ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಕಾರ್ಥಗಳಿಗಾಗಿ ಪ್ಲೇಗು ತಗುಲಿದ ಪ್ರದೇಶವೆಂದು ಎಣಿಸಲ್ಪಡುವದು.

ಸ್ಥಳ.	ತಾಲ್ಲೂಕು.
ಚಟ್ನಹಳ್ಳಿ	ಆಲೂರು ಸಬ್ ತಾಲ್ಲೂಕು.